# Akashvani : Bangalore
# Regional Bulletin In Kannada
# 22.03.2026 / 18.40  hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

22.03.2026 / 18.40   hrs

***************

ಮುಖ್ಯಾಂಶಗಳು

೧. ಉಪಚುನಾವಣೆ ನಡೆಯಲಿರುವ ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕಾಗಿ ನಾಮಪತ್ರ ಸಲ್ಲಿಸಲು ನಾಳೆ ಕೊನೆ ದಿನ

೨. ನವಮಂಗಳೂರು ಬಂದರಿನಲ್ಲಿ ಹಡಗುಗಳಿಂದ ತೈಲ-ಸರಕು ಇಳಿಸುವ ಕಾರ್ಯ ಪ್ರಗತಿಯಲ್ಲಿ

೩. ಬೆಳಗಾವಿಯಲ್ಲಿ ರಾಜ್ಯಮಟ್ಟದ ವೈಜ್ಞಾನಿಕ ಸಮ್ಮೇಳನ ಆಯೋಜನೆಗೆ ಪೂರ್ವಭಾವಿ ಸಭೆ

೪. ನಾಪೋಕ್ಲುವಿನಲ್ಲಿ ಏಪ್ರಿಲ್ ೫ ರಿಂದ ಕೊಡವ ಕುಟುಂಬ ಪಾರಂಪರಿಕ ಹಾಕಿ ಪಂದ್ಯಾವಳಿ ; ಭರದ ಸಿದ್ಧತೆ

***************

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಿಗಾಗಿ ನಡೆಯಲಿರುವ ಉಪಚುನಾವಣೆಗೆ ನಾಮಪತ್ರ ಸಲ್ಲಿಸಲು ನಾಳೆ ಕೊನೆಯ ದಿನವಾಗಿದೆ.

ನಾಮಪತ್ರ ಪರಿಶೀಲನೆ ನಾಡಿದ್ದು, ೨೪ನೇ ತಾರೀಕು ನಡೆಯಲಿದೆ. ನಾಮಪತ್ರ ಹಿಂತೆಗೆದುಕೊಳ್ಳಲು ಇದೇ ೨೬ನೇ ತಾರೀಕು ಕೊನೆಯ ದಿನ. ಮತದಾನ ಏಪ್ರಿಲ್ ೯ಕ್ಕೆ ನಿಗದಿಯಾಗಿದ್ದು, ಮೇ ೪ ರಂದು ಮತ ಎಣಿಕೆ ನಡೆಯಲಿದೆ.

ಬಾಗಲಕೋಟೆ ಕ್ಷೇತ್ರದಲ್ಲಿ ಹೆಚ್.ವೈ. ಮೇಟಿ ಅವರ ನಿಧನ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದಾಗಿ ತೆರವಾದ ಸ್ಥಾನಗಳಿಗಾಗಿ ಈ ಉಪ ಚುನಾವಣೆ ನಡೆಯುತ್ತಿದೆ.

ಈ ಉಪಚುನಾವಣೆಗಳನ್ನು ಇವಿಎಂ ಮತ್ತು ವಿವಿಪ್ಯಾಟ್ ಬಳಕೆ ಮೂಲಕ ನಿರ್ವಹಿಸಲು ಚುನಾವಣಾ ಆಯೋಗ ನಿರ್ಧರಿಸಿದೆ.

ಉಪಚುನಾವಣೆ ನಡೆಯಲಿರುವ ಎರಡೂ ವಿಧಾನಸಭಾ ಕ್ಷೇತ್ರಗಳಲ್ಲಿ ಮಹಿಳಾ ಮತದಾರರೇ ಅಧಿಕ ಸಂಖ್ಯೆಯಲ್ಲಿರುವುದು ವಿಶೇಷವೆನಿಸಿದೆ.

ಬಾಗಲಕೋಟೆ ಕ್ಷೇತ್ರದಲ್ಲಿ ೩೮ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ೪೪ ಶತಾಯುಷಿ ಮತದಾರರಿದ್ದು, ಇವರಲ್ಲಿಯೂ ಕೂಡ ಮಹಿಳಾ ಮತದಾರರ ಸಂಖ್ಯೆ ಅಧಿಕವಾಗಿದೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ೨ ಲಕ್ಷದ ೫೯ ಸಾವಿರದ ೨೬೦ ಮತದಾರರಿದ್ದು, ಇವರಲ್ಲಿ ೧ ಲಕ್ಷದ ೩೨ ಸಾವಿರದ ೪೭೬ ಮಹಿಳೆಯರು, ೧ ಲಕ್ಷದ ೨೬ ಸಾವಿರದ ೭೬೧ ಪುರುಷರು ಹಾಗೂ ೨೩ ತೃತೀಯ ಲಿಂಗಕ್ಕೆ ಸೇರಿದ ಮತದಾರರಿದ್ದಾರೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ಒಟ್ಟು ೨ ಲಕ್ಷದ ೩೧ ಸಾವಿರದ ೬೮೩ ಮತದಾರರನ್ನು ಹೊಂದಿದೆ. ಇದರಲ್ಲಿ ತೃತೀಯ ಲಿಂಗಕ್ಕೆ ಸೇರಿದ ೪೩ ಮತದಾರರಿದ್ದಾರೆ. ೧ ಲಕ್ಷದ ೧೭ ಸಾವಿರದ ೯೮೬ ಮಹಿಳೆಯರು ಹಾಗೂ ೧ ಲಕ್ಷದ ೧೩ ಸಾವಿರದ  ೬೫೪ ಪುರುಷ ಮತದಾರರು ಇದ್ದಾರೆ.

ಶುಕ್ರವಾರದವರೆಗಿನ ಅಂಕಿ-ಅಂಶಗಳ ಪ್ರಕಾರ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಲು ಒಟ್ಟು ೧೦ ಅರ್ಜಿಗಳು ಸಲ್ಲಿಕೆಯಾಗಿವೆ.

ಇನ್ನೊಂದೆಡೆ, ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಒಟ್ಟು ಐದು ಅಭ್ಯರ್ಥಿಗಳಿಂದ ಏಳು ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಚುನಾವಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ತಿಳಿಸಿದ್ದಾರೆ.

***************

ಉಪಚುನಾವಣೆ ನಡೆಯಲಿರುವ ರಾಜ್ಯದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಮತಗಟ್ಟೆಗಳಲ್ಲಿ ಮತದಾರರಿಗೆ ಅನುಕೂಲವಾಗುವಂತೆ ಎಲ್ಲ ಕನಿಷ್ಠ ಸೌಲಭ್ಯ ಖಾತರಿಪಡಿಸಬೇಕು ಎಂದು ಚುನಾವಣಾ ಆಯೋಗ ನಿರ್ದೇಶಿಸಿದೆ.

ಚುನಾವಣಾ ದಿನದಂದು ಮತದಾರರಿಗೆ ಅನುಕೂಲವಾಗುವಂತೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ನೀರಿರುವ ಶೌಚಾಲಯ ವಿಶೇಷ ಚೇತನರಿಗಾಗಿ ಸೂಕ್ತ ರ್‍ಯಾಂಪ್ ವ್ಯವಸ್ಥೆ ಮೊದಲಾದ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಚುನಾವಣಾ ಆಯೋಗ ರಾಜ್ಯ ಚುನಾವಣಾ ಅಧಿಕಾರಿಗಳಿಗೆ ಸೂಚನೆ ನೀಡಿದೆ.

ಮತದಾರರಲ್ಲಿ ತಿಳಿವಳಿಕೆ ಹೆಚ್ಚಿಸಲು ಮತಗಟ್ಟೆ, ಹಾಗೂ ಅಭ್ಯರ್ಥಿಗಳ ವಿವರ  ಪಾಲಿಸಬೇಕಾದ ನಿಯಮ ಅನುಮೋದಿತ ಗುರುತಿನ ದಾಖಲೆ ಹಾಗೂ ಮತದಾನ ಪ್ರಕ್ರಿಯೆ ಒಳಗೊಂಡ ಮತದಾರರ ಸೌಲಭ್ಯ ಭಿತ್ತಿಪತ್ರಗಳನ್ನು ಮತಗಟ್ಟೆಗಳಲ್ಲಿ ಪ್ರಮುಖವಾಗಿ ಪ್ರದರ್ಶಿಸುವ ವ್ಯವಸ್ಥೆ ಮಾಡಬೇಕು. ಮತದಾರರ ನೆರವು ಬೂತ್‌ಗಳನ್ನು ಸ್ಥಾಪಿಸಬೇಕು ಎಂದು ಚುನಾವಣಾ ಆಯೋಗ ತಿಳಿಸಿದೆ.

ಮತಗಟ್ಟೆ ಪ್ರವೇಶದ ಹೊರಗಡೆ ಮೊಬೈಲ್ ಫೋನ್‌ಗಳನ್ನು ಇಡಲು ಅವಕಾಶ ಕಲ್ಪಿಸಲು ಸೂಚಿಸಲಾಗಿದೆ.

***************

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಸಂಬಂಧಿಸಿದಂತೆ ೩೨೨ ಮತಗಟ್ಟೆಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿ, ಚುನಾವಣಾ ಅಕ್ರಮ ತಡೆಗಾಗಿ ೨೪ ಚೆಕ್ ಪೋಸ್ಟ್‌ಗಳು ಹಾಗೂ ೭೨ ಸ್ಟ್ಯಾಟಿಕ್ ಸರ್ವೆಲನ್ಸ್ ತಂಡಗಳನ್ನು ರಚಿಸಲಾಗಿದೆ ಎಂದರು.

***************

ಬಾಗಲಕೋಟೆ ಜಿಲ್ಲೆಯಲ್ಲಿ ಚುನಾವಣಾ ಹಿನ್ನೆಲೆಯಲ್ಲಿ ಕಟ್ಟುನಿಟ್ಟಿನ ವಾಹನ ತಪಾಸಣೆ ನಡೆಯುತ್ತಿರುವ ನಡುವೆಯೇ, ಹೊನ್ನಕಟ್ಟಿ ಕ್ರಾಸ್ ಚೆಕ್‌ಪೋಸ್ಟ್‌ನಲ್ಲಿ ಸ್ಥಿತಿ ಕಣ್ಗಾವಲು ತಂಡ-ಎಸ್‌ಎಸ್‌ಟಿ ಭಾರೀ ಪ್ರಮಾಣದ ನಗದು ಜಪ್ತಿ ಮಾಡಿದೆ.

ಇಂದು ಬೆಳಗ್ಗೆ ಎಸ್‌ಎಸ್‌ಟಿ ತಂಡವು ವಾಹನ ಪರಿಶೀಲನೆ ನಡೆಸುತ್ತಿದ್ದ ವೇಳೆ ಕಾರಿನಲ್ಲಿ ಮೂವತ್ತೆರೆಡುವರೆ ಲಕ್ಷ ರೂಪಾಯಿ ನಗದು ಪತ್ತೆಯಾಗಿದೆ.

ಹಣಕ್ಕೆ ಸಂಬಂಧಿಸಿದ ಸಮರ್ಪಕ ದಾಖಲೆಗಳನ್ನು ಒದಗಿಸಲಾಗದ ಹಿನ್ನೆಲೆಯಲ್ಲಿ ಕಾನೂನು ಪ್ರಕಾರ ನಗದನ್ನು ಜಪ್ತಿ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

***************

ಬೃಹತ್ ಪ್ರಮಾಣದ ಕಚ್ಚಾತೈಲ ಹೊತ್ತು ನವ ಮಂಗಳೂರು ಬಂದರಿಗೆ ಆಗಮಿಸಿರುವ ಅಕ್ವಾ ಟೈಟಾನ್ ಹಡಗಿನಿಂದ ಎಂಆರ್‌ಪಿಎಲ್ ತೈಲ ಸಂಸ್ಕರಣಾ ಘಟಕಕ್ಕೆ ತೈಲ ಪೂರೈಕೆ ಮಾಡುವ ಕಾರ್ಯ ಭರದಿಂದ ಸಾಗುತ್ತಿದ್ದು, ನಾಳೆ ಸಂಜೆಯ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ.

ರಷ್ಯಾದಿಂದ ಹೊರಟಿದ್ದ ಈ ಹಡಗಿನಿಂದ ೯೬ ಸಾವಿರ ಮೆಟ್ರಿಕ್ ಟನ್ ನಷ್ಟು ಕಚ್ಚಾತೈಲವನ್ನು ಎಂಆರ್‌ಪಿಎಲ್‌ಗೆ ಪೂರೈಸಲಾಗುತ್ತಿದೆ. ಅದೇ ರೀತಿ ಇಂದು ನವಮಂಗಳೂರು ಬಂದರಿಗೆ ಆಗಮಿಸಿರುವ 'ಪಿಕ್ಸಿಸ್ ಪಯನೀರ್ ಎಲ್‌ಪಿಜಿ ಕಾರ್ಗೋ ಹಡಗಿನಿಂದ ಸರಕು ಇಳಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದು ಮೂಲಗಳು ತಿಳಿಸಿವೆ.

ಅಮೆರಿಕಾದ ಟೆಕ್ಸಾಸ್‌ನಿಂದ ಹೊರಟಿದ್ದ ಈ ಹಡಗು ೧೬ ಸಾವಿರದ ೭೧೪ ಮೆಟ್ರಿಕ್ ಟನ್ ದ್ರವೀಕೃತ ಪೆಟ್ರೋಲಿಯಂ ಅನಿಲ ಹೊತ್ತು ಬಂದಿದೆ. ಅಗತ್ಯ ಸುರಕ್ಷತಾ ಕ್ರಮಗಳೊಂದಿಗೆ ಎಲ್‌ಪಿಜಿ ಇಳಿಸುವ ಕಾರ್ಯ ಸಾಗುತ್ತಿದೆ.

***************

ಬೆಳಗಾವಿಯಲ್ಲಿ ನಡೆಸಲು ಉದ್ದೇಶಿಸಿರುವ ರಾಜ್ಯ ಮಟ್ಟದ ವೈಜ್ಞಾನಿಕ ಸಮ್ಮೇಳನ ಅತ್ಯಂತ ಯಶಸ್ವಿಯಾಗಿಸಲು ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಇಂದು ನಡೆದ ವೈಜ್ಞಾನಿಕ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿಜ್ಞಾನ ಅಧ್ಯಯನ, ಸಮಾಜದ ಪ್ರಗತಿ, ಸಮಗ್ರ ಅಭಿವೃದ್ಧಿಯ

ಮೂಲಸ್ತಂಭವಾಗಿದೆ. ವೈಜ್ಞಾನಿಕ ಮನೋಭಾವ ಹಾಗೂ ನೂತನ ಆವಿಷ್ಕಾರಗಳು ಯುವ ಸಮುದಾಯದ ಉಜ್ವಲ ಭವಿಷ್ಯಕ್ಕೆ ಕೊಡುಗೆ ನೀಡುತ್ತವೆ ಎಂದರು.

ಈ ಹಿಂದೆ ವಿವಿಧೆಡೆ ನಡೆದ ಐದು ಸಮ್ಮೇಳನಗಳು ಯಶಸ್ಸು ಸಾಧಿಸಿದ್ದು, ಬೆಳಗಾವಿಯಲ್ಲಿ ನಡೆಯುವ ಸಮ್ಮೇಳನವನ್ನು ವ್ಯವಸ್ಥಿತವಾಗಿ ನಡೆಸಲಾಗುವುದು. ಸಮ್ಮೇಳನದ ದಿನಾಂಕವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಸಚಿವ ಜಾರಕಿಹೊಳಿ ಈ ಸಂದರ್ಭದಲ್ಲಿ ತಿಳಿಸಿದರು.

***************

ವಿಜಯಪುರ ನಗರ ಹೊರ ವಲಯದ ಹಂಚನಾಳ ಕೆರೆಯ ಕಲುಷಿತ ನೀರನ್ನು ಸಂಸ್ಕರಿಸಬೇಕು ಹಾಗೂ ಕೆರೆ ಅಭಿವೃದ್ಧಿಪಡಿಸಿ ಸುಂದರಗೊಳಿಸಬೇಕು ಎಂದು ಅಧಿಕಾರಿಗಳಿಗೆ, ಜಿಲ್ಲಾಧಿಕಾರಿ ಡಾ.ಆನಂದ ಕೆ. ಸೂಚಿಸಿದ್ದಾರೆ.

ಇತ್ತೀಚೆಗೆ ನಡೆದ ನಗರಾಭಿವೃದ್ಧಿ ಪ್ರಾಧಿಕಾರದ ಸಾಮಾನ್ಯ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ನೀಡಿದ ನಿರ್ದೇಶನದ ಮೇರೆಗೆ ಜಿಲ್ಲಾಧಿಕಾರಿಗಳು ಹಂಚನಾಳ ಕೆರೆಗೆ ಭೇಟಿ ನೀಡಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕೆರೆಯ ಸುತ್ತಲೂ ೩೦ ಮೀಟರ್ ಅಗಲದ ಹೆಚ್ಚುವರಿ ಜಾಗವನ್ನು ಕಡ್ಡಾಯವಾಗಿ ಮೀಸಲಿರಿಸಬೇಕೆಂದು ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದ್ದಾರೆ.

***************

ನಂಜನಗೂಡಿನ ಐತಿಹಾಸಿಕ ಶ್ರೀ ಶ್ರೀಕಂಠೇಶ್ವರಸ್ವಾಮಿ ದೊಡ್ಡ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿರುವ 'ಗರಳಪುರಿ ಉತ್ಸವ-೨೦೨೬'ರ ಪ್ರಯುಕ್ತ ಇಂದು ಬೆಳಗ್ಗೆ ಯೋಗ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ನಂಜನಗೂಡು ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್ ಯೋಗವು ಭಾರತೀಯ ಸಂಸ್ಕೃತಿಯ ಅಮೂಲ್ಯ ಪರಂಪರೆಯಾಗಿದೆ. ಇಂದಿನ ವೇಗದ ಜೀವನಶೈಲಿಯಲ್ಲಿ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರೂ ಯೋಗವನ್ನು ದಿನಚರಿಯಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

***************

ಕೊಡವ ಕುಟುಂಬಗಳ ನಡುವಿನ ೨೬ನೇ ವರ್ಷದ ಹಾಕಿ ಪಂದ್ಯಾವಳಿಗಾಗಿ ಸಿದ್ಧತೆಗಳು ನಡೆಯುತ್ತಿವೆ. ಮಡಿಕೇರಿಯಿಂದ ೪೦ ಕಿಲೋಮೀಟರ್ ದೂರದಲ್ಲಿರುವ ನಾಪೋಕ್ಲುವಿನಲ್ಲಿ ಈ ವರ್ಷದ ಹಾಕಿ ಪಂದ್ಯಾವಳಿ ಆಯೋಜಿತವಾಗಿದೆ.

ಏಪ್ರಿಲ್ ೫ ರಿಂದ ೧ ತಿಂಗಳ ಕಾಲ ನಡೆಯುವ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯನ್ನು ಚೇನಂಡ ಕುಟುಂಬಸ್ಥರು ಆಯೋಜಿಸುತ್ತಿದ್ದು ರಾಜ್ಯ ಸರ್ಕಾರ ಪಂದ್ಯಾವಳಿಗೆ ೧ ಕೋಟಿ ರೂಪಾಯಿ ಅನುದಾನ ಬಿಡುಗಡೆಗೊಳಿಸಿದೆ.

ನಾಪೋಕ್ಲುವಿನಲ್ಲಿ ಹಾಕಿ ಪಂದ್ಯಾವಳಿಗಾಗಿ ಮೈದಾನವನ್ನು ಸಮತಟ್ಟುಗೊಳಿಸುವ ಕಾರ್ಯ ಬಿರುಸಿನಿಂದ ಸಾಗಿದ್ದರೆ ಮತ್ತೊಂದೆಡೆ ೩೦ ಸಾವಿರ ಮಂದಿಗೆ ಕೂರಲು ಸುಸಜ್ಜಿತ ಗ್ಯಾಲರಿ ನಿರ್ಮಾಣ ಕಾರ್ಯ ಕೂಡ ಪ್ರಗತಿಯಲ್ಲಿದೆ.

ಕೊಡವ ಕುಟುಂಬಗಳಲ್ಲಿ ಹಾಕಿ ಕ್ರೀಡೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ೨೬ ವರ್ಷಗಳ ಹಿಂದೆ ಪ್ರಾರಂಭವಾದ ಕ್ರೀಡಕೂಟವು ೬ನೇ ಬಾರಿಗೆ ನಾಪೋಕ್ಲುವಿನಲ್ಲಿ ನಡೆಯುತ್ತಿರುವುದು ವಿಶೇಷವಾಗಿದೆ. ನಾಲ್ಕು ಮೈದಾನಗಳಲ್ಲಿ ಹಾಕಿ ಪಂದ್ಯಾವಳಿ ಆಯೋಜಿಸಲಾಗಿದ್ದು ಸುಮಾರು ೩೦ ಮಹಿಳಾ ಹಾಕಿ ತಂಡಗಳೂ ಈ ಬಾರಿ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳುತ್ತಿರುವುದು ವಿಶೇಷವಾಗಿದೆ.

***************

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿಯ ಕೆಲವು ಸ್ಥಳಗಳಲ್ಲಿ ಗರಿಷ್ಠ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಾಗಿದೆ. ದಿನದ ಅತ್ಯಧಿಕ ತಾಪಮಾನ ೩೬.೬ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ.

ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ ೨೪ ಗಂಟೆಗಳವರೆಗೆ ಭಾಗಶಃ ಮೋಡ ಕವಿದ ವಾತಾವರಣವಿರಲಿದೆ. ಕೆಲವು ಪ್ರದೇಶಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ.

ಗರಿಷ್ಠ ತಾಪಮಾನ ೩೩ ಹಾಗೂ ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

***************

ಕೋಲಾರ ಜಿಲ್ಲೆ ವ್ಯಾಪ್ತಿಯಲ್ಲಿ ಹೆಚ್ಚುತ್ತಿರುವ ಕಾಡ್ಗಿಚ್ಚು ಪ್ರಕರಣಗಳನ್ನು ನಿಯಂತ್ರಿಸಲು ವಿಶೇಷ ತಂಡ ರಚಿಸುವ ಜೊತೆಗೆ ಕಾಡ್ಗಿಚ್ಚು ಹಚ್ಚುವ ಕಿಡಿಗೇಡಿಗಳ ವಿರುದ್ಧ ಗೂಂಡಾ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕೆಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಉಪ ಅರಣ್ಯ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲಿಗಾರ್ ಅವರನ್ನು ಆಗ್ರಹಿಸಿದ್ದಾರೆ.

ಕಾಡ್ಗಿಚ್ಚಿನಿಂದ ವನ್ಯಜೀವಿಗಳು ಮಾತ್ರವಲ್ಲದೆ, ಪರಿಸರ ಸಮತೋಲನಕ್ಕೆ ಧಕ್ಕೆಯಾಗುತ್ತದೆ. ಮಣ್ಣಿನ ನೀರು ಹೀರಿಕೊಳ್ಳುವ ಸಾಮರ್ಥ್ಯ ಕುಗ್ಗಿ ಭವಿಷ್ಯದಲ್ಲಿ ನೆರೆ ಹಾವಳಿ ಹೆಚ್ಚುವ ಸಾಧ್ಯತೆಯೂ ಇದೆ. ಅರಣ್ಯ ಅತಿಕ್ರಮಣ, ಕಳ್ಳಬೇಟೆ, ಕೃಷಿ ತ್ಯಾಜ್ಯಗಳ ನಿರ್ಲಕ್ಷ್ಯ ವಿಲೇವಾರಿ ಹಾಗೂ ಕಿಡಿಗೇಡಿಗಳ ಅಜಾಗರೂಕತೆಯೇ ಬೆಂಕಿಗೆ ಪ್ರಮುಖ ಕಾರಣಗಳೆಂದು ಅವರು ಹೇಳಿದ್ದಾರೆ.

*******ಮುಕ್ತಾಯ*******